ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ
ಶ್ರೀರಂಗಪಟ್ಟಣ

ಸಿ.ಸಿ.505 /2014

| | |
|---|---|
| ಸಿ.ಡಬ್ಲ್ಯೂ : | 4 |
| ಪಿ.ಡಬ್ಲ್ಯೂ : | 3 |

| | | |
|---|---|---|
| ಸಾಕ್ಷಿದಾರರ ಹೆಸರು | : | ದೇವನಾಥ್ |
| ತಂದೆ/ ಪತಿಯ ಹೆಸರು | : | ಕೆಂಪೇಗೌಡ |
| ವಯಸ್ಸು | : | 34 ವರ್ಷ |
| ವೃತ್ತಿ | : | ವ್ಯವಸಾಯ |
| ವಾಸ | : | ಹೊಸಕೋಟೆ ಗ್ರಾಮ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 30.09.2025**

**ಮುಖ್ಯ ವಿಚಾರಣೆ: ಮಾನ್ಯ ಪ್ರಭಾರ ಎ ಪಿ ಪಿ ರವರಿಂದ**

ನನಗೆ ಚಾಸಾ-1 ಮತ್ತು 2 ರವರ ಪರಿಚಯ ಇರುವುದಿಲ್ಲ. ನಾನು ಯಾವುದೇ ಘಟನೆಯನ್ನು ನೋಡಿರುವುದಿಲ್ಲ. ನನಗೆ ಆರೋಪಿತರು ಗೊತ್ತಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. .

(ಈ ಹಂತದಲ್ಲಿ ಮಾನ್ಯ ಪ್ರಭಾರ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

ಪಾಟಿ ಸವಾಲು: ಮಾನ್ಯ ಸ.ಸ.ಅ ರವರಿಂದ

ದಿ: 19.03.2013 ರಂದು ಸಂಜೆ 7.30 ಗಂಟೆ ಸಮಯದಲ್ಲಿ ನಾನು ಚಾಸಾ.1 ರವರ ಜೊತೆ ಹೋಗುತ್ತಿದ್ದಾಗ ಆರೋಪಿತರು ನಮ್ಮನ್ನು ತಡೆದು ನಿಲ್ಲಿಸಿ ಚಾಸಾ.1 ಮತ್ತು 2 ರವರಿಗೆ ಅವ್ಯಾಚ ಶಬ್ದಗಳಿಂದ ಬೈದು ಸರ್ಕಾರಿ ಕೆಲಸಕ್ಕೆ ಅಡಚಣೆ ಉಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ

ಇದ್ದರೂ ಏನು ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಘಟನೆಯ ಸಂಬಂಧ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂ ದರೆ ಸರಿಯಲ್ಲ. ಸಾಕ್ಷಿಯು ಹೇಳಿಕೆ ನೀಡಿಲ್ಲ ಎಂದು ತಿಳಿಸಿದ್ದರಿಂದ ಸಾಕ್ಷಿಯ ಹೇಳಿಕೆಯನ್ನು ಅಭಿಯೋಜನೆಯ ಪರವಾಗಿ ನಿಪಿ.4 ಎಂದು , ಅದರಲ್ಲಿರುವ ಆಯ್ದ ಭಾಗವನ್ನು ನಿಪಿ.4(ಎ) ಎಂದು ಗುರುತಿಸಲಾಯಿತು. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರು ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲು ಃ ಆರೋಪಿ ಪರ ವಕೀಲರಿಂದ</u>

ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲಎಂದು ತಿಳಿಸಿದ್ದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.